ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 : ದಿನಾಂಕ : 20–07–2018

# ಪತ್ರಿಕಾ ಆಮಂತ್ರಣ

1. ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ:

   ತಿಂಗಳ ಅತಿಥಿ:

   ಡಾ. ಸಿ.ಎನ್. ಮಂಜುನಾಥ್,
   ನಿರ್ದೇಶಕರು,
   ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ,

   ದಿನಾಂಕ: 21–07–2018, ಶನಿವಾರ, ಸಂಜೆ 4–00 ಗಂಟೆಗೆ.

   ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

ಸಂಖ್ಯೆ696/796

## ಪತ್ರಿಕಾ ಪ್ರಕಟಣೆ

## ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗದಿಂದ ಅಬಕಾರಿ ಇಲಾಖೆಯಲ್ಲಿನ ಅಬಕಾರಿ ರಕ್ಷಕರು (ಪುರುಷ) 952 ಹುದ್ದೆಗಳು ಮತ್ತು ಅಬಕಾರಿ ರಕ್ಷಕರು (ಮಹಿಳೆ) 51 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 1:2 ರ ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಹೆಸರು/ನೋಂದಣಿ ಸಂಖ್ಯೆಯುಳ್ಳ ಅರ್ಹತಾ ಪಟ್ಟಿಯನ್ನು

ಆಯೋಗದ ಅಂತರ್ಜಾಲ http//kpsc.kar.nic.in. ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಅರ್ಹ ಅಭ್ಯರ್ಥಿಗಳಿಗೆ ನಡೆಸುವ ಮೂಲ ದಾಖಲೆಗಳ ಪರಿಶೀಲನಾ ದಿನಾಂಕವನ್ನು ನಂತರದಲ್ಲಿ ತಿಳಿಸಲಾಗುವುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಸಂಖ್ಯೆ697/797

## ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಆಹಾರ ಮತ್ತು ನಾಗರೀಕ ಸರಬರಾಜು, ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವ ಜಮೀರ್ ಅಹಮದ್ ಖಾನ್, ಅವರು ಜುಲೈ 18 ರಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ (ಕರ್ನಾಟಕ ಸರ್ಕಾರದ ಸ್ವಾಮ್ಯದ ಉದ್ಯಮ) ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದರು.

ಇದೇ ಸಂದರ್ಭದಲ್ಲಿ ಸಚಿವರು ಅವರ ಅಮೃತಹಸ್ತದಿಂದ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಗೃಹ ನಿರ್ಮಾಣ ಮಾರ್ಜಿನ್ ಹಣ ಸಾಲ ಯೋಜನೆಯಡಿ ತುಮಕೂರು ಜಿಲ್ಲೆಯ ಮತೀಯ ಅಲ್ಪಸಂಖ್ಯಾತ ಸಮುದಾಯಗಳ 1403 ಫಲಾನುಭವಿಗಳಿಗೆ ಪಾವತಿಸಬೇಕಾದ ವಂತಿಕೆಯ ಮೊತ್ತ 10.23 ಕೋಟಿ ರೂ. ಗಳ ನಿಗಮದ ಚೆಕ್‌ನ್ನು ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧಿಕಾರಿಗಳಿಗೆ ಹಸ್ತಾಂತರಿಸಿದರು.

ಕಾರ್ಯಕ್ರಮದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಮಹಮ್ಮದ್ ಮೊಹಸಿನ್, ಅಲ್ಪಸಂಖ್ಯಾತರ ನಿರ್ದೇಶನಾಲಯದ ನಿರ್ದೇಶಕ ಅಕ್ರಂ ಪಾಷ, ಇಸ್ಲಾವುದ್ದೀನ್ ಜೆ. ಗದ್ಯಾಳ, ವ್ಯವಸ್ಥಾಪಕ ನಿರ್ದೇಶಕರು ಹಾಗೂ ನಿಗಮದ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

ಸಂಖ್ಯೆ698/798

## 2016-17 ಮತ್ತು 2017-18 ನೇ ಸಾಲಿನ ಪುಸ್ತಕ ಬಹುಮಾನಕ್ಕಾಗಿ ಜಾನಪದ ಕೃತಿಗಳ ಆಹ್ವಾನ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಕರ್ನಾಟಕ ಜಾನಪದ ಅಕಡೆಮಿಯು ದಿನಾಂಕ: 01-01-2016 ರಿಂದ 31-12-2016 ರವರೆಗೆ ಹಾಗೂ ದಿನಾಂಕ: 01-01-2017 ರಿಂದ 31-12-2017 ರವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಮಡಿರುವ ಕನಿಷ್ಠ 150 ಪುಟಗಳ ಮಿತಿಯಲ್ಲಿರುವ ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ-ವಿಮರ್ಶೆ-ಸಂಶೋಧನೆ ಹಾಗೂ ಜನಪದ ಸಂಕೀರ್ಣ ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನ ನೀಡುವ ಯೋಜನೆಯಡಿಯಲ್ಲಿ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಿದೆ.

ಲೇಖಕರು/ಪ್ರಕಾಶಕರು/ಸಂಪಾದಕರು 4 ಕೃತಿಗಳನ್ನು ದ್ವಿಪ್ರತಿ ಬಿಲ್ಲಿನೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು -560 002 ಇವರಿಗೆ ದಿನಾಂಕ: 10-08-2018 ರೊಳಗೆ ಖುದ್ದಾಗಿ, ಕೋರಿಯರ್ ಅಥವಾ ಅಂಚೆ ಮೂಲಕ ಕಳುಹಿಸಿಕೊಡಲು ಪ್ರಕಟಣೆ ಕೋರಿದೆ.

ಸಂಖ್ಯೆ699/799

**2016, 2017 ಹಾಗೂ 2018 ನೇ ಸಾಲಿನ**

## ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಪದವಿಪೂರ್ವ ಶಿಕ್ಷಣ ಇಲಾಖೆಯು 2016, 2017 ಹಾಗೂ 2018 ನೇ ಸಾಲಿನ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.

2016 ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit ranser (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರು ದ್ವಿತೀಯ ನವೀಕರಣಕ್ಕೆ ಆನ್‌ಲೈನ್ ಮೂಲಕವೇ ಅರ್ಜಿಯನ್ನು ಸಲ್ಲಿಸಬೇಕು.

ಕೇಂದ್ರ ಸರ್ಕಾರದ ವತಿಯಿಂದ ವೆಬ್‌ಸೈಟ್ www.scholarships.gov.in ನ National e-scholarship portal ನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ದ್ವಿತೀಯ ನವೀಕರಣದ ನಿಮಿತ್ತ ಈ Portal ನಲ್ಲಿಯೇ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸಬಹುದಾಗಿದೆ.

2017 ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit ranser (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರು ಪ್ರಥಮ ನವೀಕರಣಕ್ಕೆ ಆನ್‌ಲೈನ್ ಮೂಲಕವೇ ಅರ್ಜಿಯನ್ನು ಸಲ್ಲಿಸಬೇಕು.

ಕೇಂದ್ರ ಸರ್ಕಾರದ ವತಿಯಿಂದ ವೆಬ್‌ಸೈಟ್ www.scholarships.gov.in ನ National e-scholarship portal ನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ದ್ವಿತೀಯ ನವೀಕರಣದ ನಿಮಿತ್ತ ಈ Portal ನಲ್ಲಿಯೇ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸಬಹುದಾಗಿದೆ.

2018 ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit ranser (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರು ಪ್ರಥಮ ನವೀಕರಣಕ್ಕೆ ಆನ್‌ಲೈನ್ ಮೂಲಕವೇ ಅರ್ಜಿಯನ್ನು ಸಲ್ಲಿಸಬೇಕು.

ಕೇಂದ್ರ ಸರ್ಕಾರದ ವತಿಯಿಂದ ವೆಬ್‌ಸೈಟ್ www.scholarships.gov.in ನ National e-scholarship portal ನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ದ್ವಿತೀಯ ನವೀಕರಣದ ನಿಮಿತ್ತ ಈ Portal ನಲ್ಲಿಯೇ 2018 ರ Fresh Batch ನ ವಿದ್ಯಾರ್ಥಿಗಳುಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ700/800

## ಬೆಂಗಳೂರು ಗುಲಾಬಿ ಈರುಳ್ಳಿ ಕುರಿತಂತೆ

# ಒಂದು ದಿನದ ವಿಚಾರ ವಿನಿಮಯ ಕಾರ್ಯಾಗಾರ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ ಹಾಗೂ ಕೇಂದ್ರ ಸರ್ಕಾರದ ಅಪೇಡಾ ಹಾಗೂ ತೋಟಗಾರಿಕೆ ಇಲಾಖೆಗಳ ಸಹಯೋಗದಲ್ಲಿ ಜುಲೈ 21 ರಂದು ಒಕ್ಕಲಿಗರ ಕಲ್ಯಾಣ ಮಂಟಪ, ನಂ 1, ಎನ್‌ಎಚ್ –7 ಚಿಕ್ಕಬಳ್ಳಾಪುರ ಇಲ್ಲಿ ಬೆಂಗಳೂರು ಗುಲಾಬಿ ಈರುಳ್ಳಿ ಬೆಳೆಯಲ್ಲಿ ಗುಣಮಟ್ಟದ ಬೇಸಾಯ, ಕೊಯ್ಲಿನ ನಂತರದ ನಿರ್ವಹಣೆ ಮತ್ತು ರಫ್ತು ಅವಕಾಶಗಳ ಕುರಿತಂತೆ ಒಂದು ದಿನದ ವಿಚಾರ ವಿನಿಮಯ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಾಗಾರವನ್ನು ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ಉದ್ಘಾಟಿಸಲಿದ್ದಾರೆ. ಕೃಷಿ ಇಲಾಖೆಯ ಆಯುಕ್ತರು, ನಿರ್ದೇಶಕರು, ವಿಷಯ ತಜ್ಞರು, ವಿಜ್ಞಾನಿಗಳು ಹಾಗೂ ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಈ ಕಾರ್ಯಾಗಾರದಲ್ಲಿ ಬೆಂಗಳೂರು ಗುಲಾಬಿ ಈರುಳ್ಳಿಯಲ್ಲಿ ಉತ್ತಮ ಬೇಸಾಯ ಕ್ರಮಗಳು, ಕ್ಯೋತ್ತರ ತಾಂತ್ರಿಕತೆ, ರಫ್ತು ಮಾರುಕಟ್ಟೆಯ ಸಾಮರ್ಥ್ಯ, ಗುಣಮಟ್ಟ ಮುಂತಾದ ವಿಷಯಗಳ ಮಂಡನೆ ಮತ್ತು ವಿಜ್ಞಾನಿಗಳು, ರಫ್ತುದಾರರು ಮತ್ತು ಇಲಾಖಾ ಅಧಿಕಾರಿಗಳೊಂದಿಗೆ ಚರ್ಚೆ/ವಿಚಾರ ವಿನಿಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಸಂಖ್ಯೆ701/801

**ಅತ್ಯುತ್ತಮ ಸೇವೆ ಸಲ್ಲಿಸಿದ/ಸಾಧನೆ ಮಾಡಿದ ವ್ಯಕ್ತಿಗಳು/ಸಂಸ್ಥೆಗಳಿಗೆ**

## ರಾಷ್ಟ್ರಪಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು 2018 ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ವಿಕಲಚೇತನರ ಪುನರ್ವಸತಿಗಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ/ಸಾಧನೆ ಮಾಡಿದ ವ್ಯಕ್ತಿಗಳು/ಸಂಸ್ಥೆಗಳಿಗೆ ರಾಷ್ಟ್ರಪ್ರಶಸ್ತಿ ನೀಡಲು ಅರ್ಜಿಗಳನ್ನು ಆಹ್ವಾನಿಸಿರುತ್ತಾರೆ.

ಈ ಪ್ರಶಸ್ತಿಗೆ ಅರ್ಹರಿರುವ ವಿಕಲಚೇತನ ವ್ಯಕ್ತಿಗಳು ಹಾಗೂ ವಿಕಲಚೇತನರಿಗಾಗಿ ಶ್ರಮಿಸುತತಿರುವ ಸಂಸ್ಥೆಗಳು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಶಿಫಾರಸ್ಸಿನೊಂದಿಗೆ ಆಂಗ್ಲಭಾಷೆಯಲ್ಲಿ ಅರ್ಜಿಯನ್ನು ಪೂರಕ ದಾಖಲೆಗಳೊಡನೆ ಸಲ್ಲಿಸಲು ಆಗಸ್ಟ್ 6 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆಗಳಿಗಾಗಿ ವೆಬ್‌ಸೈಟ್ ವಿಳಾಸ www.disabilityaffairs.gov.in ಅನ್ನು ಪರಿಶೀಲಿಸಲು ಮತ್ತು ಆಯಾ ಜಿಲ್ಲೆಗಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಅಥವಾ ನಿರ್ದೇಶಕರು, ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ : 080–22866066, 22866046, 22860907 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಇಲಾಖಾ ಪ್ರಕಟಣೆ ತಿಳಿಸಿದೆ.

ಸಂಖ್ಯೆ702/802

# 2017–18 ನೇ ವಾರ್ಷಿಕ ಲೆಕ್ಕತ:ಖ್ತೆ ವೆಬ್‌ಸೈಟ್‌ನಲ್ಲಿ ಬಿಡುಗಡೆ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರ ಅಖಿಲ ಭಾರತೀಯ ಸೇವಾನಿರತ (ಎ.ಐ.ಎಸ್) ಅಧಿಕಾರಿಗಳ ರಾಜ್ಯ ಶ್ರೇಷ್ಟ ನ್ಯಾಯಾಲಯದ ಗೌರವಾನ್ವಿತ ನ್ಯಾಯಾಧೀಶರುಗಳ ಹಾಗೂ ರಾಜ್ಯದ ಸರ್ಕಾರದ ಇತರ ಇಲಾಖಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಕರ್ನಾಟಕ ಭವಿಷ್ಯ ನಿಧಿಯ 2017–18 ವಾರ್ಷಿಕ ಲೆಕ್ಕತ:ಖ್ತೆಗಳನ್ನು ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡಲಾಗಿದೆ.

ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿಯ ವಂತಿಗೆದಾರರು ತಮ್ಮ ಸಾಮಾನ್ಯ ಭವಿಷ್ಯ ನಿಧಿಯ 2017–18 ನೇ ಸಾಲಿನ ವಾರ್ಷಿಕ ತ:ಖ್ತೆಯನ್ನು ಎ.ಜಿ. ಕರ್ನಾಟಕ ಕಚೇರಿಯ ವೆಬ್‌ಸೈಟ್ http://www.agkar.cag.gov.in ವಿಳಾಸದಿಂದ ಪಡೆಯಬಹುದಾಗಿದೆ ಎಂದು ಮಹಾಲೇಖಪಾಲರು (ಲೆಕ್ಕ ಮತ್ತು ಹಕ್ಕುದಾರಿ), ಕರ್ನಾಟಕ ಬೆಂಗಳೂರು ಅವರು ತಿಳಿಸಿರುತ್ತಾರೆ.

ವಂತಿಗೆದಾರರ ಅನುಕೂಲಕ್ಕಾಗಿ ಸಾಮಾನ್ಯ ಭವಿಷ್ಯ ನಿಧಿಯ ವಾರ್ಷಿಕ ಲೆಕ್ಕತ:ಖ್ತೆಗಳನ್ನು ಹೆಚ್.ಆರ್.ಎಂ.ಎಸ್. ವೆಬ್‌ಸ್ಟ್ ವಿಳಾಸ http://www//hrms.karnataka.gov.in ಇಂದ ಸಂಬಂಧಪಟ್ಟ ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಗಳ ಮೂಲಕವೂ (HRMS_MENU_HOME_MIS_REPORT_DOWNLOAD_GPF STATEMENT) ಪಡೆದುಕೊಳ್ಳುವ ವ್ಯವಸ್ಥೆಯನ್ನು ಮಾಡಲಾಗಿದೆ.

ವಂತಿಗೆದಾರರಿಗೆ ವೆಬ್‌ಸೈಟ್‌ನಿಂದ ವಾರ್ಷಿಕ ಲೆಕ್ಕತ:ಖ್ತೆಗಳನ್ನು ಪಡೆಯಲು ತೊಂದರೆ ಎದುರಾದಲ್ಲಿ ಈ ಕಚೇರಿಯ ಇ–ಮೇಲ್ ವಿಳಾಸ (agpf.kar@nic.in) ಕ್ಕೆ ಅಥವಾ ದೂರವಾಣಿ ಸಂಖ್ಯೆ 080–22640310 ಸಂಪರ್ಕಿಸಲು ಕೋರಲಾಗಿದೆ.

ವಂತಿಕೆದಾರರು ತಮ್ಮ ವಾರ್ಷಿಕ ಲೆಕ್ಕತ:ಖ್ತೆಯನ್ನು ವಂತಿಕೆ ಹಾಗೂ ಮುಂಗಡ/ಭಾಗಶ: ಹಿಂತೆಗೆತದ ವಿಷಯವಾಗಿ ಏನಾದರೂ ಲೋಪದೋಷಗಳು ಕಂಡುಬಂದಲ್ಲಿ , ಲೇಖಾಧಿಕಾರಿ. ಫಂಡ್ಸ್, ಮಹಾಲೇಖಪಾಲರ ಕಚೇರಿ (ಲೆಕ್ಕ ಮತ್ತು ಹಕ್ಕುದಾರಿ) ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು – 560 001 ಇವರಿಗೆ ಪತ್ರ ಬರೆಯಬಹುದಾಗಿದೆ ಅಥವಾ ಸಾ.ಭ.ನಿ ವಾರ್ಷಿಕ ಲೆಕ್ಕತ:ಖ್ತೆಯ ಮೇಲ್ಭಾಗದ ಬಲತುದಿಯಲ್ಲಿ ಮುದ್ರಿತವಾಗಿರುವ ದೂರವಾಣಿ ಸಂಖ್ಯೆಗಳ ಮೂಲಕ ಈ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.